ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE :

# ಸಾರಿಗೆ ಸಂಸ್ಥೆಗಳಿಗೆ 4 ಸಾವಿರ ಕೋಟಿ ಖೋತಾ

## ಶೌಚಾಲಯಗಳ ನಿರ್ವಹಣೆ ಹೊರಗುತ್ತಿಗೆಗೆ ಎಂದ ಡಿಸಿಎಂ ಸವದಿ

ರಾಜ್ಯದಲ್ಲಿ ಕೊರೊನಾ ಸೋಂಕು ವ್ಯಾಪಿಸಿದ ನಂತರ ನಾಲ್ಕು ಸಾರಿಗೆ ಸಂಸ್ಥೆಗಳಿಗೆ 4 ಸಾವಿರ ಕೋಟಿ ರೂ. ಖೋತಾ ಆಗಿದೆ. ಈ ಪೈಕಿ 2980 ಕೋಟಿ ರೂ. ನಿವ್ವಳ ಆದಾಯ ನಷ್ಟವಾಗಿದೆ ಎಂದು ಉಪ ಮುಖ್ಯಮಂತ್ರಿ, ಸಾರಿಗೆ ಸಚಿವ ಲಕ್ಷ್ಮಣ ಸವದಿ ತಿಳಿಸಿದರು.

ಪ್ರಶ್ನೋತ್ತರ ವೇಳೆಯಲ್ಲಿ ಜೆಡಿಎಸ್‌ನ ಕೆ.ಟಿ.ಶ್ರೀಕಂಠೇಗೌಡ ಅವರ ಪ್ರಶ್ನೆಗೆ ಉತ್ತರಿಸಿ, ''ಸಾರಿಗೆ ಸಂಸ್ಥೆಗಳ ನಷ್ಟ ಸರಿದೂಗಿಸಲು ಆಯವ್ಯಯದಲ್ಲಿ ಹೆಚ್ಚಿನ ಅನುದಾನ ಕೋರಲಾಗಿದೆ. ಮುಖ್ಯಮಂತ್ರಿಗಳು ಸಹ ಅನುದಾನ ನೀಡುವ ಭರವಸೆ ಕೊಟ್ಟಿದ್ದಾರೆ,'' ಎಂದು ಹೇಳಿದರು.

''ಬೆಂಗಳೂರಿನಲ್ಲಿನ ಸ್ಯಾಟಲೈಟ್ ಬಸ್ ನಿಲ್ದಾಣಗಳ ಮಾದರಿಯಲ್ಲಿಯೇ ರಾಜ್ಯದ ಹಲವೆಡೆ ನಿಲ್ದಾಣಗಳನ್ನು ನಿರ್ಮಿಸಲಾಗುತ್ತಿದೆ. ದಾವಣಗೆರೆಯಲ್ಲಿ 100 ಕೋಟಿ ರೂ. ವೆಚ್ಚದಲ್ಲಿ ನಿಲ್ದಾಣ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಲಾಗಿದೆ. ಇಲ್ಲಿ ಶಾಪಿಂಗ್ ಕಾಂಪ್ಲೆಕ್ಸ್, ಸಿನಿಮಾ ಮಂದಿರವೂ ಇರಲಿದೆ. ಕೆಎಸ್‌ಆರ್‌ಟಿಸಿಯ 99 ನಿಲ್ದಾಣ, ಬಿಎಂಟಿಸಿಯ 14, ವಾಯವ್ಯ ಸಾರಿಗೆ ಸಂಸ್ಥೆಯ 159 ಮತ್ತು ಈಶಾನ್ಯ ಸಾರಿಗೆ ಸಂಸ್ಥೆಯ 123 ಬಸ್ ನಿಲ್ದಾಣಗಳಲ್ಲಿ ಮಹಿಳೆಯರಿಗಾಗಿ ವಿಶ್ರಾಂತಿ ಗೃಹಗಳನ್ನು ನಿರ್ಮಿಸಲಾಗಿದೆ. ಉಳಿದ ನಿಲ್ದಾಣಗಳಲ್ಲಿ ವಿಶ್ರಾಂತಿ ಕೊಠಡಿಗಳನ್ನು ನಿರ್ಮಿಸಲು ಕ್ರಮ ಕೈಗೊಳ್ಳಲಾಗುವುದು. ಶೌಚಾಲಯಗಳ ನಿರ್ವಹಣೆಯನ್ನು ಹೊರಗುತ್ತಿಗೆ ನೀಡಲು ತೀರ್ಮಾನಿಸಲಾಗಿದೆ,'' ಎಂದರು.



**ಪ್ರಯಾಣಿಕರ ಸಾಗಿಸುವ ವಾಹನಗಳ ವಿರುದ್ಧ ಕ್ರಮ**

ಸರಕು ಸಾಗಣೆ ವಾಹನಗಳಲ್ಲಿ ನಿಯಮಬಾಹಿರವಾಗಿ ಪ್ರಯಾಣಿಕರನ್ನು ಸಾಗಿಸುವ ವಾಹನಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಸಾರಿಗೆ ಇಲಾಖೆ ಅಧಿಕಾರಿಗಳು ಹಾಗೂ ಸಂಚಾರ ಪೊಲೀಸರಿಗೆ ಸೂಚನೆ ನೀಡಲಾಗುವುದು ಎಂದು ಸಚಿವ ಲಕ್ಷ್ಮಣ ಸವದಿ ಹೇಳಿದರು.

ಕಾಂಗ್ರೆಸ್‌ನ ಆರ್.ಪ್ರಸನ್ನಕುಮಾರ್ ಪ್ರಶ್ನೆಗೆ ಉತ್ತರಿಸಿದ ಅವರು, ''ಸರಕು ಸಾಗಣೆ ವಾಹನಗಳಲ್ಲಿ ಪ್ರಯಾಣಿಕರನ್ನು ಸಾಗಿಸಲು ಅವಕಾಶವಿಲ್ಲ. ನಿಯಮ ಉಲ್ಲಂಘಿಸುವವರ ವಿರುದ್ಧ ಕಠಿಣ ಕ್ರಮ ಜರುಗಿಸಲಾಗುವುದು. ಮ್ಯಾಕ್ಸಿಕ್ಯಾಬ್ ವಾಹನಗಳಲ್ಲಿ 16+1 ರಿಂದ 20+1 ಆಸನಗಳವರೆಗೆ ಮಾರ್ಪಡಿಸಿಕೊಳ್ಳಲು ಅವಕಾಶ ನೀಡಲಾಗಿದೆ,'' ಎಂದು ತಿಳಿಸಿದರು.

### ಸಿಂಗ್ ಆಪ್ತನ ಪತ್ರಕ್ಕೆ ಅಸಮಾಧಾನ

ಪರಿಷತ್ ಅಧಿವೇಶನಕ್ಕೆ ಗೈರು ಹಾಜರಾಗುತ್ತಿರುವ ಕುರಿತು ಸಚಿವ ಆನಂದ್‌ಸಿಂಗ್ ಪರವಾಗಿ ಅವರ ಆಪ್ತ ಸಹಾಯಕ ಪತ್ರ ಬರೆದು ಮಾಹಿತಿ ನೀಡಿರುವುದಕ್ಕೆ ಸಭಾಪತಿ ಬಸವರಾಜ ಹೊರಟ್ಟಿ ಶುಕ್ರವಾರ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಕಲಾಪವು ಬೆಳಗ್ಗೆ ಶುರುವಾದಾಗ ಪ್ರತಿಪಕ್ಷ ನಾಯಕ ಎಸ್.ಆರ್.ಪಾಟೀಲ್, ''ಸಚಿವರೂ ಇಲ್ಲ, ಅಧಿಕಾರಿಗಳೂ ಇಲ್ಲ. ಸದನವನ್ನು ಯಾರಿಗಾಗಿ ನಡೆಸಬೇಕು,'' ಎಂದು ಆಕ್ಷೇಪಿಸಿದರು. ಇದಕ್ಕೆ ಸಮಜಾಯಿಷಿ ನೀಡಿದ ಸಭಾ ನಾಯಕ ಕೋಟಾ ಶ್ರೀನಿವಾಸ ಪೂಜಾರಿ, ''ಹೆಚ್ಚಿನ ಸಚಿವರು ವಿಧಾನಸಭೆಯಲ್ಲಿದ್ದಾರೆ'' ಎಂದರು.

ಮಧ್ಯ ಪ್ರವೇಶಿಸಿದ ಹೊರಟ್ಟಿ, ''ಪೂರ್ವ ನಿಯೋಜಿತ ಕಾರ್ಯಕ್ರಮಗಳ ಕಾರಣದಿಂದ ಸದನಕ್ಕೆ ಗೈರಾಗುವ ಕುರಿತು ಸಭಾಪತಿಗೆ ಸಚಿವರೇ ಪತ್ರ ಬರೆಯಬೇಕು. ರಮೇಶ್ ಬಾಬು ಎಂಬ ಆಪ್ತ ಸಹಾಯಕನ ಹೆಸರಿನ ಪತ್ರ ನೋಡಿ ತಕ್ಷಣ ರಮೇಶ್ ಬಾಬು ಎಂಬ ಹೊಸ ಸಚಿವರು ಇರಬಹುದು ಎಂದುಕೊಂಡೆ' ಎಂದು ಅಸಮಾಧಾನ ಹೊರಹಾಕಿದರು.